**All India Radio: Bangalore**

**Regional Bulletin In Kannada**

**09.04.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**09.04.2025 / 2.30 p.m.**

****************

ಮುಖ್ಯಾಂಶಗಳು

೧. ರಾಜ್ಯದಲ್ಲಿ ಆನ್‌ಲೈನ್ ಬೆಟ್ಟಿಂಗ್ ಹಾವಳಿ ತಡೆಗೆ ಹೊಸ ಕಾನೂನು ಜಾರಿ - ಗೃಹ ಸಚಿವ ಡಾ.ಜಿ.ಪರಮೇಶ್ವರ್

೨. ಬೆಂಗಳೂರು-ಕುಕ್ಕೆ ಸುಬ್ರಹ್ಮಣ್ಯ ನಡುವೆ ಹೊಸ ರೈಲು ಸೇವೆ -ತುಮಕೂರಿನಲ್ಲಿ ಕೇಂದ್ರ ಸಚಿವ ವಿ.ಸೋಮಣ್ಣ ಘೋಷಣೆ

೩. ಬೆಂಗಳೂರು ಸಮೀಪ ಎರಡನೇ ಅಂತಾರಾಷ್ಟ್ರೀಯ ವಿಮಾನ -ಇಂದು ನೆಲಮಂಗಲ-ಕುಣಿಗಲ್‌ನಲ್ಲಿ ಸ್ಥಳ ಪರಿಶೀಲನೆ

೪. ಕೊಡಗಿನಲ್ಲಿ ಬಿಜೆಪಿ ಜನಕ್ರೋಶ ಯಾತ್ರೆ; ಸರ್ಕಾರದ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪ

೫. ಹಿರಿಯ ಸಾಹಿತಿ ಬಾನು ಮುಷ್ತಾಕ್ ಅವರ ಹಾರ್ಟ್ ಲ್ಯಾಂಪ್ ಬೂಕರ್ ಪ್ರಶಸ್ತಿ ೨೦೨೫ರ ಅಂತಿಮ ಪಟ್ಟಿಗೆ ಆಯ್ಕೆ

***************

ರಾಜ್ಯದಲ್ಲಿ ಆನ್‌ಲೈನ್ ಬೆಟ್ಟಿಂಗ್ ಹಾವಳಿ ತಡೆಗೆ ಕಾನೂನು ತರಲು ತೀರ್ಮಾನಿಸಲಾಗಿದ್ದು, ಹಿರಿಯ ಅಧಿಕಾರಿಗಳ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಮಂಡ್ಯ ಜಿಲ್ಲಾ ಪೊಲೀಸ್ ಘಟಕದ ಪ್ರಗತಿ ಪರಿಶೀಲನೆಗೆ ಅಗಮಿಸಿದ್ದ ವೇಳೆ ಮಾತನಾಡಿದ ಅವರು, ಬಂಡವಾಳ ಹೂಡಿಕೆ ಮತ್ತು ಜಿಎಸ್‌ಟಿ ಪಾವತಿಸುವುದರಲ್ಲಿ ದೇಶದಲ್ಲೇ ರಾಜ್ಯ ಎರಡನೇ ಸ್ಥಾನದಲ್ಲಿದ್ದು, ರಾಜ್ಯದ ಆರ್ಥಿಕ ಸ್ಥಿತಿ ಸಶಕ್ತವಾಗಿದೆ ಎಂದು ಹೇಳಿದರು. ಐದು ಗ್ಯಾರಂಟಿ ಯೋಜನೆಗಳಿಗೆ ಆಯವ್ಯಯನಲ್ಲಿ ಹಣ ಮೀಸಲಿಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಗ್ಯಾರಂಟಿ ಯೋಜನೆಯಿಂದ ಯಾವುದಾದರು ಅಭಿವೃದ್ಧಿ ಕಾರ್ಯಗಳು ನಿಂತಿವೆಯೇ ಎಂದು ಪ್ರಶ್ನಿಸಿದ ಅವರು, ಬೆಲೆ ಏರಿಕೆ ವಿರುದ್ಧ ಬಿಜೆಪಿ ನಡೆಸುತ್ತಿರುವ ಹೋರಾಟ ಒಂದು ವಿಪರ್ಯಾಸ ಎಂದು ಪ್ರತಿಕ್ರಿಯಿಸಿದರು.

***************

ಕರ್ನಾಟಕದಲ್ಲಿ ಹೊಸ ರೈಲ್ವೆ ಯುಗ ಆರಂಭವಾಗಿದ್ದು, ನೆನೆಗುದಿಗೆ ಬಿದ್ದಿದ್ದ ರೈಲ್ವೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ಎಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ.

ತುಮಕೂರಿನಲ್ಲಿ ರೈಲ್ವೆ ಮೇಲ್ಸುತುವೆ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಇದೇ ೧೨ ರಿಂದ ಬೆಂಗಳೂರಿನಿಂದ ಕುಕ್ಕೆ ಸುಬ್ರಹ್ಮಣ್ಯಕ್ಕೆ ಹೊಸ ರೈಲು ಸಂಚರಿಸಲಿದ್ದು, ಬಹುಬೇಡಿಕೆಯ ಕಬಕ-ಪುತ್ತೂರು ಎಕ್ಸ್‌ಪ್ರೆಸ್ ರೈಲಿಗೆ ಚಾಲನೆ ನೀಡಲಾಗುವುದು ಎಂದು ಘೋಷಿಸಿದ್ದಾರೆ.

ಧ್ವನಿ: ಸೋಮಣ್ಣ

ಬೆಂಗಳೂರಿನಿಂದ ಕುಕ್ಕೆ ಸುಬ್ರಹ್ಮಣ್ಯಕ್ಕೆ ಈ ರೈಲು ಪ್ರತಿ ದಿನ ನಾಲ್ಕು ಬಾರಿ ಸಂಚರಿಸಲಿದೆ. ಇದೇ ೧೧ ರಂದು ಹಾವೇರಿಯಿಂದ ಬೆಂಗಳೂರಿಗೆ ಸಂಚರಿಸುವ ವಂದೇ ಭಾರತ್ ರೈಲಿಗೂ ಚಾಲನೆ ನೀಡಲಾಗುವುದು. ಮುಂದಿನ ೧೫ ದಿನಗಳಲ್ಲಿ ಗದಗ, ವಾಡಿ, ಕುಷ್ಟಗಿ, ಯಲಬುರಗಿ ಸೇರಿದಂತೆ ೧೦೦ಕ್ಕೂ ಅಧಿಕ ಕಿಲೋಮೀಟರ್ ಕಾಮಗಾರಿಯನ್ನು ಪೂರ್ಣಗೊಳಿಸಿ ಲೋಕಾರ್ಪಣೆ ಮಾಡಲಾಗುವುದು ಎಂದು ಮಾಹಿತಿ ನೀಡಿದ್ದಾರೆ.

***************

ಬೆಂಗಳೂರು ಸಮೀಪ ನಿರ್ಮಿಸಲು ಉದ್ದೇಶಿಸಿರುವ ೨ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಗುರುತಿಸಿರುವ ಮೂರು ಸ್ಥಳಗಳ ಪೈಕಿ ನೆಲಮಂಗಲ- ಕುಣಿಗಲ್ ರಸ್ತೆಯ ಸ್ಥಳವನ್ನು ಇಂದು ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರದ, ಉನ್ನತ ಮಟ್ಟದ ತಂಡ ಪರಿಶೀಲಿಸಲಿದೆ.

ಕನಕಪುರ ರಸ್ತೆಯಲ್ಲಿರುವ ಎರಡು ಸ್ಥಳಗಳ ಪರಿಶೀಲನೆ ನಿನ್ನೆ ನಡೆಸಿದೆ. ಬಳಿಕ ನಿಯೋಗದ ಸದಸ್ಯರು ಮೂಲಸೌಕರ್ಯಾಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದರು.

***************

ರಾಜ್ಯದಲ್ಲಿ ಬಿಜೆಪಿ ಕಾರ್ಯಕರ್ತರ ಮೇಲಿನ ದೌರ್ಜನ್ಯ ನಿರಂತರವಾಗಿ ಮುಂದುವರೆದಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ.

ಮಡಿಕೇರಿಯಲ್ಲಿಂದು ನಡೆದ ಜನಾಕ್ರೋಶ ಸಮಾವೇಶದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆ ನೀತಿ, ಜನವಿರೋಧಿ ತೀರ್ಮಾನಗಳ ವಿರುದ್ಧ ರಾಜ್ಯವ್ಯಾಪಿ ಜನಾಕ್ರೋಶ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಈ ಸಮಾವೇಶಕ್ಕೆ ಜನರು ಹೆಚ್ಚಿನ ಸಂಖ್ಯೆಯಲ್ಲಿ ಸೇರುತ್ತಿರುವುದೇ ರಾಜ್ಯ ಸರ್ಕಾರದ ವಿರುದ್ಧ ವ್ಯಕ್ತವಾಗಿರುವ ಆಕ್ರೋಶಕ್ಕೆ ಸಾಕ್ಷಿ ಎಂದು ಉಲ್ಲೇಖಿಸಿದರು.

ಪರಿಶಿಷ್ಟ ಜಾತಿ - ಪಂಗಡಕ್ಕೆ ಮೀಸಲಿಟ್ಟ ಅನುದಾನವನ್ನು ಸರ್ಕಾರ ವಿನಿಯೋಗ ಮಾಡದೇ ಬೇರೆ ಉದ್ದೇಶಕ್ಕೆ ಬಳಸಿಕೊಂಡಿದೆ ಎಂದು ಸಹ ಅವರು ದೂರಿದರು.

ಬಿಜೆಪಿ ಸಂಸದ ಯದುವೀರ್ ಒಡೆಯರ್, ಪ್ರತಿಪಕ್ಷ ನಾಯಕ ಆರ್. ಅಶೋಕ, ಸೇರಿದಂತೆ ಅನೇಕ ಮುಖಂಡರು ಸಮಾವೇಶದಲ್ಲಿ ಭಾಗಿವಹಿಸಿದ್ದರು.

***************

ಕರ್ನಾಟಕ ಮೂಲದ ಬರಹಗಾರ್ತಿ, ಕಾರ್ಯಕರ್ತೆ ಮತ್ತು ವಕೀಲೆ ಬಾನು ಮುಷ್ತಾಕ್ ಅವರ ಸಣ್ಣ ಕಥಾ ಸಂಕಲನ "ಹಾರ್ಟ್ ಲ್ಯಾಂಪ್" ಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿ ೨೦೨೫ ಸಂಭವನೀಯ ಪಟ್ಟಿಗೆ ಆಯ್ಕೆಯಾಗಿದೆ. ಈ ಕೃತಿಯನ್ನು ದೀಪಾ ಭಸ್ತಿ ಅವರು ಕನ್ನಡದಿಂದ ಇಂಗ್ಲಿಷ್‌ಗೆ ಅನುವಾದಿಸಿದ್ದಾರೆ.

ವಿಶ್ವದ ವಿವಿಧ ೧೦೪ ಕೃತಿಗಳ ಪೈಕಿ, ಬಾನು ಮುಷ್ತಾಕ್ ಅವರ ಕೃತಿಯೂ ಸೇರಿದಂತೆ ಆರು ಕೃತಿಗಳು ಮಾತ್ರ ಈ ಅಂತಿಮ ಪಟ್ಟಿಯಲ್ಲಿ ಸ್ಥಾನ ಪಡೆದಿವೆ. ಮೇ ೨೦ರಂದು ಲಂಡನ್‌ನಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ವಿಜೇತರ ಹೆಸರನ್ನು ಘೋಷಿಸಲಾಗುತ್ತದೆ.

ಹಾಸನ ಮೂಲದವರಾದ ಬಾನು ಮುಷ್ತಾಕ್, ಬೂಕರ್ ಪ್ರಶಸ್ತಿಯ ಸಂಭನೀಯರ ಪಟ್ಟಿಯಲ್ಲಿ ಸ್ಥಾನ ಪಡೆದ ಕನ್ನಡದ ಮೊದಲ ಸಾಹಿತಿ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದ್ದಾರೆ. ಹಾರ್ಟ್ ಲ್ಯಾಂಪ್ ಕೃತಿ ಕಳೆದ ವರ್ಷ ಪೆನ್ ಟ್ರಾನ್ಸಲೇಟ್ಸ್ ಪ್ರಶಸ್ತಿಯನ್ನೂ ಪಡೆದಿತ್ತು.

***************

ಇದೇ ೩೦ ರಂದು ಬಸವ ಜಯಂತಿ ಮತ್ತು ಅಕ್ಷಯ ತೃತೀಯ ಹಿನ್ನೆಲೆಯಲ್ಲಿ ಬಾಲ್ಯವಿವಾಹ ಪ್ರಕರಣಗಳ ಸಾಧ್ಯತೆ ಇದ್ದು, ಕಟ್ಟುನಿಟ್ಟಿನ ಕ್ರಮವಹಿಸುವಂತೆ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಧಾರ್ಮಿಕ ಸ್ಥಳಗಳಲ್ಲಿ ಮತ್ತು ಕಲ್ಯಾಣ ಮಂಟಪಗಳಲ್ಲಿ ಯಾವುದೇ ಬಾಲ್ಯವಿವಾಹಗಳು ಜರುಗದಂತೆ ಕ್ರಮವಹಿಸಬೇಕು ಎಂದು ಹೇಳಿದ್ದಾರೆ. ಜಿಲ್ಲೆಯಲ್ಲಿ ಬಾಲ್ಯವಿವಾಹ ನಡೆಯುತ್ತಿರುವುದು ಗಮನಕ್ಕೆ ಬಂದರೆ ತುರ್ತಾಗಿ ಮಕ್ಕಳ ಸಹಾಯವಾಣಿ ೧೦೯೮, ಪೊಲೀಸ್ ಸಹಾಯವಾಣಿ ೧೧೨ ಮತ್ತು ಮಕ್ಕಳ ರಕ್ಷಣಾ ಘಟಕ ೦೮೦-೨೯೫೬೦೦೩೪ ಹಾಗೂ ಸಂಬಂಧಪಟ್ಟ ಹತ್ತಿರದ ಪೊಲೀಸ್ ಠಾಣೆಗೆ ದೂರು ಸಲ್ಲಿಸಬಹುದು ಎಂದು ಮಾಹಿತಿ ನೀಡಿದ್ದಾರೆ.

***************

ದ್ವಿತಿಯ ಪಿಯುಸಿ ವಾಣಿಜ್ಯ ವಿಭಾಗದಲ್ಲಿ ಕೋಲಾರ ತಾಲೂಕಿನ ಹುದುಕುಳದ ಎಚ್.ಬಿ.ಭಾರ್ಗವಿ ೬೦೦ಕ್ಕೆ ೫೯೭ ಅಂಕ ಪಡೆದು ರಾಜ್ಯಕ್ಕೆ ಮೂರನೇ ರ್‍ಯಾಂಕ್ ಪಡೆದಿದ್ದಾರೆ.

ಕನ್ನಡದಲ್ಲಿ ೯೮, ಇಂಗ್ಲಿಷ್‌ನಲ್ಲಿ ೯೯, ಅರ್ಥಶಾಸ್ತ್ರ, ವಾಣಿಜ್ಯ ವ್ಯಾಸಂಗ, ಲೆಕ್ಕಶಾಸ್ತ್ರ, ಅಂಕಿಅಂಶ ವ್ಯಾಸಂಗದಲ್ಲಿ ತಲಾ ೧೦೦ ಅಂಕಗಳಿಸುವ ಮೂಲಕ ಕೀರ್ತಿ ಸಾಧಿಸಿದ್ದಾರೆ.

ಸಿಎ ಮಾಡುವ ಗುರಿ ಇದೆ ಎಂದು ಎಚ್.ಬಿ.ಭಾರ್ಗವಿ ಆಕಾಶವಾಣಿ ಜೊತೆಗೆ ಮಾಹಿತಿ ಹಂಚಿಕೊಂಡಿದ್ದಾರೆ.

ಧ್ವನಿ- ಎಚ್.ಬಿ.ಭಾರ್ಗವಿ

***************

ಗೃಹ ಬಳಕೆಯ ಅಡುಗೆ ಅನಿಲ ಸಿಲಿಂಡರ್ ಮತ್ತು ಇಂಧನ ದರ ಹೆಚ್ಚಳ ವಿರೋಧಿಸಿ ದಾವಣಗೆರೆಯಲ್ಲಿಂದು ಜಿಲ್ಲಾ ಯುವ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ನಗರದ ಜಯದೇವ ವೃತ್ತದಲ್ಲಿ ಎತ್ತಿನ ಬಂಡಿಯ ಮೇಲೆ ಖಾಲಿ ಸಿಲಿಂಡರ್‌ಗಳನ್ನು ಮೆರವಣಿಗೆ ಮಾಡುವ ಮೂಲಕ ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ನಂತರ ಮೆರವಣಿಗೆ ಮೂಲಕ ಸಾಗಿ ಉಪವಿಭಾಗಾಧಿಕಾರಿಗಳ ಕಚೇರಿಗೆ ತೆರಳಿ ಮನವಿ ಸಲ್ಲಿಸಿದರು.

***************

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಈ ವರ್ಷದಲ್ಲಿ ಬಿಸಿಲಿನ ಪ್ರಖರತೆ ಹೆಚ್ಚಾಗಿರುವುರಿಂದ, ಪಾರಂಪರಿಕ ಮಾಗಿ ಉಳುಮೆ ಮಾಡಿದರೆ ರೈತರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಕೃಷಿ ಜಂಟಿ ನಿರ್ದೇಶಕಿ ಕಲಾವತಿ ತಿಳಿಸಿದ್ದಾರೆ.

ಈ ಕುರಿತು ರೈತರಿಗೆ ಮಾಹಿತಿ ನೀಡಿರುವ ಅವರು, ಬಹುತೇಕ ರೈತರು ಮಾಗಿ ಉಳುಮೆ ಮಾಡುವುದನ್ನು ಮರೆತಿರುವುದರಿಂದ ಅನೇಕ ರೀತಿಯ ಸಸ್ಯರೋಗ, ಕೀಟರೋಗ ಭಾದೆ ಹೆಚ್ಚಾಗಲು ಕಾರಣವಾಗಿದೆ. ರೈತರು ಈ ಸಮಯದ ಸದುಪಯೋಗ ಪಡೆದುಕೊಳ್ಳುವಂತೆ ಸಲಹೆ ನೀಡಿದ್ದಾರೆ.

***************

೨೦೨೫-೨೬ನೇ ಸಾಲಿನ ಅಗ್ನಿವೀರರ ನೇಮಕಾತಿಗಾಗಿ ಆನ್‌ಲೈನ್ ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸಲಾಗುವುದು ಎಂದು ರಕ್ಷಣಾ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

ಮೊದಲ ಹಂತದಲ್ಲಿ ದೇಶಾದ್ಯಂತ ನಿಗದಿಪಡಿಸಿದ ಕಂಪ್ಯೂಟರ್ ಆಧಾರಿತ ತರಬೇತಿ ಕೇಂದ್ರಗಳಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಯಲಿದೆ. ಎರಡನೇ ಹಂತದಲ್ಲಿ ಸೇನಾ ನೇಮಕಾತಿ ಕಚೇರಿಗಳು ಗೊತ್ತುಪಡಿಸುವ ಸ್ಥಳಗಳಲ್ಲಿ ರ‍್ಯಾಲಿ ನಡೆಸಲಿವೆ.

ನೇಮಕಾತಿ ರ‍್ಯಾಲಿ ಅಧಿಸೂಚನೆಯನ್ನು ಮಾರ್ಚ್ ೧೧ ರಂದು ಪ್ರಕಟಿಸಲಾಗಿದೆ. ನೇಮಕಾತಿಗಾಗಿ ನಾಳೆಯೊಳಗೆ ಆನ್‌ಲೈನ್ ನೋಂದಣಿ ಮಾಡಿಸಿಕೊಳ್ಳಬಹುದಾಗಿದೆ.

******* ಮುಕ್ತಾಯ *******